# All India Radio: Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**29.01.2025** **19.35 p.m.**

**<><><><>**

ಮುಖ್ಯಾಂಶಗಳು

- ರಾಷ್ಟ್ರೀಯ ನಿರ್ಣಾಯಕ ಖನಿಜ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
- ನವದೆಹಲಿಯ ವಿಜಯ್ ಚೌಕ್‌ನಲ್ಲಿಂದು ಗಣರಾಜ್ಯೋತ್ಸವದ ಬೀಟಿಂಗ್ ರಿಟ್ರೀಟ್ ಸಮಾರಂಭ ಸಂಪನ್ನ
- ದೆಹಲಿ ವಿಧಾನಸಭಾ ಚುನಾವಣೆಗೆ ಪ್ರಚಾರ ಬಿರುಸು ; ವಿವಿಧ ರಾಜಕೀಯ ಪಕ್ಷಗಳಿಂದ ಸಾರ್ವಜನಿಕ ಸಭೆ
- ೩೮ನೇ ರಾಷ್ಟ್ರೀಯ ಕ್ರೀಡಾಕೂಟ ; ಮಹಿಳಾ ೧೦ ಮೀಟರ್ ಏರ್ ರೈಫಲ್‌ನಲ್ಲಿ ಕರ್ನಾಟಕದ ಮೇಘನಾ ಸಜ್ಜನರ್ ಫೈನಲ್ ಪ್ರವೇಶ

<><><><>

೩೪ ಸಾವಿರ ಕೋಟಿ ರೂಪಾಯಿಗೂ ಅಧಿಕ ವೆಚ್ಚದ ರಾಷ್ಟ್ರೀಯ ನಿರ್ಣಾಯಕ ಖನಿಜ ಯೋಜನೆಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಹಸಿರು ತಂತ್ರಜ್ಞಾನ ಉತ್ತೇಜಿಸಲು ಅಗತ್ಯವಾದ ನಿರ್ಣಾಯಕ ಖನಿಜ ಸಂಪನ್ಮೂಲಗಳಿಗಾಗಿ ಸ್ಥಿರ ಮೌಲ್ಯ ಸರಪಳಿಯನ್ನು ನಿರ್ಮಿಸಲು ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ನಿರ್ಣಾಯಕ ಖನಿಜಗಳ ಪಾತ್ರದ ಕುರಿತು ವಿವರಿಸಿದರು. ನಿರ್ಣಾಯಕ ಖನಿಜ ತಂತ್ರಜ್ಞಾನಗಳು ಕೃಷಿ, ಇಂಧನ ಪರಿವರ್ತನೆ, ರಕ್ಷಣೆ, ವಿದ್ಯುನ್ಮಾನ, ದೂರಸಂಪರ್ಕ, ಸಾರಿಗೆ, ಬಾಹ್ಯಾಕಾಶ, ಪರಮಾಣು ಮತ್ತು ಇತರ ವಲಯಗಳಿಗೆ ಅತ್ಯಗತ್ಯ ಎಂದು ಹೇಳಿದರು. ಖನಿಜಗಳ ಆಮದಿನ ಮೇಲಿನ ಅವಲಂಬನೆಯನ್ನು ಕಡಿತಗೊಳಿಸಲು ಮತ್ತು ನಿರ್ಣಾಯಕ ಖನಿಜಗಳ ಪರಿಶೋಧನೆಯಲ್ಲಿ ದೇಶದ ಸಾಮರ್ಥ್ಯವನ್ನು ಹೆಚ್ಚಿಸಲು ಈ ಯೋಜನೆಗೆ ಅನುಮೋದನೆ ನೀಡಲಾಗಿದೆ ಎಂದರು.

ರಾಷ್ಟ್ರೀಯ ನಿರ್ಣಾಯಕ ಖನಿಜಗಳ ಯೋಜನೆ ಜೊತೆಗೆ ಕಬ್ಬಿನಿಂದ ಎಥನಾಲ್ ಸಂಗ್ರಹಣೆಯ ಬೆಲೆಗೂ ಸರ್ಕಾರ ಅನುಮೋದನೆ ನೀಡಿದೆ. ಸಕ್ಕರೆ ಕಾರ್ಖಾನೆಗಳ ಕಾಕಂಬಿಯಿಂದ ಉತ್ಪಾದನೆಯಾಗುವ ಎಥೆನಾಲ್ ದರವನ್ನು ಲೀಟರ್ ಗೆ ೫೭ ರೂಪಾಯಿ ೯೭ ಪೈಸೆಯಿಂದ ೬೦ ರೂಪಾಯಿ ೩೨ ಪೈಸೆಗೆ ಏರಿಸಲು ಸಂಪುಟ ಒಪ್ಪಿಗೆ ನೀಡಿದೆ. ಈ ಕುರಿತು ಮಾತನಾಡಿರುವ ಸಚಿವರು, ಎಥನಾಲ್ ಮಿಶ್ರಣ, ದೇಶದ ಆರ್ಥಿಕತೆಗೂ ಸಹಾಯ ಮಾಡಲಿದ್ದು, ೧ ಲಕ್ಷದ ೧೩ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿದೇಶಿ ವಿನಿಮಯವನ್ನು ಉಳಿಸಲಾಗಿದೆ. ಕಳೆದ

ಎಥನಾಲ್ ಪೂರೈಕೆ ವರ್ಷದಲ್ಲಿ ರೈತರಿಗೆ ೪೦ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತವನ್ನು ಪಾವತಿಸಲಾಗಿದೆ ಎಂದು ತಿಳಿಸಿದ್ದಾರೆ.

<><><>

ಗಣರಾಜ್ಯೋತ್ಸವ ಕಾರ್ಯಕ್ರಮಗಳ ಸಮಾರೋಪದ ಅಂಗವಾಗಿ ನವದೆಹಲಿಯ ವಿಜಯ್ ಚೌಕ್‌ನಲ್ಲಿಂದು ಬೀಟಿಂಗ್ ರಿಟ್ರೀಟ್ ಸಮಾರಂಭ ನಡೆಯಿತು. ಈ ವೇಳೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಲೋಕಸಭಾ ಸ್ಪೀಕರ್ ಓಂಬಿರ್ಲಾ ಮತ್ತು ಹಲವು ಕೇಂದ್ರ ಸಚಿವರು ಉಪಸ್ಥಿತರಿದ್ದರು. ಈ ಸಮಾರಂಭ ಕದಮ್ ಕದಮ್ ಬಡಾಯೇ ಜಾ ಎಂಬ ಹಾಡಿನೊಂದಿಗೆ ಆರಂಭಗೊಂಡಿತು. ಬಳಿಕ ಅಮರ್ ಭಾರತಿ, ಇಂಧ್ರ ಧನುಷ್, ಜೈ ಜನಮ್ ಭೂಮಿ ಮತ್ತು ವೀರ್ ಸಿಯಾಚಿನ್ ಗೀತೆಗಳನ್ನು ಪೈಪ್ಸ್ ಮತ್ತು ಡ್ರಮ್ಸ್ ಬ್ಯಾಂಡ್ ಪ್ರಸ್ತುತ ಪಡಿಸಿತು.

<><><>

ದೆಹಲಿ ವಿಧಾನಸಭಾ ಚುನಾವಣೆಗೆ ಕಾಲ ಸಮೀಪಿಸುತ್ತಿರುವಂತೆ ವಿವಿಧ ರಾಜಕೀಯ ಪಕ್ಷಗಳ ಪ್ರಚಾರ ಕಾರ್ಯ ಬಿರುಸುಗೊಂಡಿದೆ. ಈಶಾನ್ಯ ದೆಹಲಿಯ ಯಮುನಾ ಖಾದರ್‌ನಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ದೆಹಲಿಯ ಜನರು ಬಡವರಿಗೆ ಮನೆ ನಿರ್ಮಿಸಿಕೊಡುವ ದೆಹಲಿಯನ್ನು ಆಧುನೀಕರಿಸುವ, ಎಲ್ಲಾ ಮನೆಗಳಿಗೆ ನೀರನ್ನು ಒದಗಿಸುವ ಮತ್ತು ಟ್ಯಾಂಕರ್ ಮಾಫೀಯಾ ಮುಕ್ತಗೊಳಿಸುವ ಸರ್ಕಾರ ಬಯಸುತ್ತಿದ್ದಾರೆ ಎಂದು ಹೇಳಿದ್ದಾರೆ. ಅವರು, ಪ್ರಸ್ತುತ ರಾಜ್ಯ ಸರ್ಕಾರದ ಲೂಟಿ, ಅನವಶ್ಯಕ ನೆಪಗಳು ಮತ್ತು ಅಸತ್ಯ ಆಶ್ವಾಸನೆಗಳು ಇನ್ನು ಮುಂದುವರೆಯಲು ಸಾಧ್ಯವಿಲ್ಲ. ಕಳೆದ ೨೫ ವರ್ಷಗಳ ಕಾಂಗ್ರೆಸ್ ಹಾಗೂ ಎಎಪಿ ಪಕ್ಷದ ಆಡಳಿತಾವಧಿಯಲ್ಲಿ ದೆಹಲಿ ಸಮಸ್ಯೆಗಳು ಇನ್ನು ಹಾಗೆಯೇ ಇದ್ದು, ಎರಡೂ ಪಕ್ಷಗಳು, ಎರಡೂ ಪೀಳಿಗೆಗಳನ್ನು ನಾಶ ಮಾಡಿವೆ. ಬಿಜೆಪಿ ಅಧಿಕಾರಕ್ಕೆ ಬಂದರೆ ತಾನು ನೀಡಿರುವ ಎಲ್ಲ ಆಶ್ವಾಸನೆಗಳನ್ನು  ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು. ಇದು ಮೋದಿಯ ಗ್ಯಾರಂಟಿ ಎಂದು ಪ್ರಧಾನಿ ತಿಳಿಸಿದರು. ಬಳಿಕ ಪ್ರಧಾನಿ, ಘೊಂಡ ಕ್ಷೇತ್ರದ ಕರ್ತಾರ್ ನಗರದಲ್ಲಿ ಚುನಾವಣಾ ಪ್ರಚಾರ ಕೈಗೊಂಡರು. ಉತ್ತರಾಖಂಡ್ ಮುಖ್ಯಮಂತ್ರಿ ಬಾದರ್‌ಪುರ್ ಪ್ರದೇಶದಲ್ಲಿ ತಮ್ಮ ಪಕ್ಷದ ಅಭ್ಯರ್ಥಿಯ ಪರ ಮತಯಾಚಿಸಿದರು.

<><><>

ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಬಾಡ್ಲಿ ಮತ್ತು ತಿಮರ್‌ಪುರ್ ಪ್ರದೇಶದಲ್ಲಿ ಪ್ರಚಾರ ಕೈಗೊಂಡರೆ, ಪಂಜಾಬ್ ಮುಖ್ಯಮಂತ್ರಿ ಭಗವಂತ ಮಾನ್, ರಜೌರಿ ಗಾರ್ಡನ್, ತಿಲಕ್‌ನಗರ್, ವಿಕಾಸ್‌ಪುರಿ ಪ್ರದೇಶದಲ್ಲಿ ಬೃಹತ್ ರೋಡ್ ಶೋ ನಡೆಸಿದರು. ಇದರ ನಡುವೆ ಕಾಂಗ್ರೆಸ್ ಪಕ್ಷ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಉಚಿತ ಆರೋಗ್ಯ ವಿಮೆ ಕೊಡುವುದಾಗಿ ಭರವಸೆ ನೀಡಿದೆ.

<><><>

ಮುಂಬರುವ ದೆಹಲಿ ವಿಧಾನಸಭಾ ಚುನಾವಣೆಗೆ ಕಾಂಗ್ರೆಸ್ ಪಕ್ಷ ಇಂದು ತನ್ನ ಚುನಾವಣಾ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ. ಕಾಂಗ್ರೆಸ್ ಹಿರಿಯ ನಾಯಕರಾದ ಜೈರಾಮ್ ರಮೇಶ್, ಪವನ್ ಖೇರಾ ಮತ್ತು ಪಕ್ಷದ ದೆಹಲಿ ಘಟಕದ ಮುಖ್ಯಸ್ಥ ದೇವೇಂದ್ರ ಯಾದವ್ ಇಂದು ತಮ್ಮ ಪಕ್ಷದ ಪ್ರಣಾಳಿಕೆ ಬಿಡುಗಡೆಗೊಳಿಸಿದರು. ಪ್ಯಾರಿ ದೀದಿ ಯೋಜನೆಯಡಿ ಮಹಿಳೆಯರಿಗೆ ಪ್ರತಿ ತಿಂಗಳು ೨ ಸಾವಿರದ ೫೦೦ ರೂಪಾಯಿ, ೨೫ ಲಕ್ಷ ರೂಪಾಯಿವರೆಗೆ ಉಚಿತ ಆರೋಗ್ಯ ವಿಮೆ, ೫೦೦ ರೂಪಾಯಿಗೆ ಎಲ್‌ಪಿಜಿ ಅಡುಗೆ ಅನಿಲ, ಉಚಿತ ರೇಷನ್ ಕಿಟ್, ೩೦೦ ಯುನಿಟ್‌ಗಳವರೆಗೆ ಉಚಿತ ವಿದ್ಯುತ್ ನೀಡುವ ಕುರಿತಂತೆ ಪ್ರಣಾಳಿಕೆಯಲ್ಲಿ ಆಶ್ವಾಸನೆ ನೀಡಲಾಗಿದೆ. ಇದರ ಜೊತೆಗೆ ಜಾತಿ ಗಣತಿ ನಡೆಸುವ ಕುರಿತಂತೆಯೂ ಭರವಸೆ ನೀಡಲಾಗಿದ್ದು, ಪಕ್ಷ ಅಧಿಕಾರಕ್ಕೆ ಬಂದರೆ ಪೂರ್ವಾಂಚಲದವರಿಗೆ ಪ್ರತ್ಯೇಕ ಇಲಾಖೆ ಸ್ಥಾಪಿಸುವುದಾಗಿ ಕಾಂಗ್ರೆಸ್ ತಿಳಿಸಿದೆ. ಪ್ರಣಾಳಿಕೆ ಬಿಡುಗಡೆಗೊಳಿಸಿ ಮಾತನಾಡಿದ ಜೈರಾಮ್ ರಮೇಶ್, ೫ ಗ್ಯಾರಂಟಿಗಳನ್ನು ದೆಹಲಿಯ ಜನರಿಗಾಗಿ ಘೋಷಿಸಲಾಗಿದ್ದು, ೧ ಗ್ಯಾರಂಟಿ ಎಂದರೆ, ಅದು ಜನರ ಹಕ್ಕು ಎಂದಿದ್ದಾರೆ. ದೇವೇಂದ್ರ ಯಾದವ್ ಮಾತನಾಡಿ, ಗುತ್ತಿಗೆ ಆಧಾರದ ಹುದ್ದೆಗಳನ್ನು ಖಾಯಂಗೊಳಿಸುವ ಕುರಿತಂತೆ ಪಕ್ಷ ಕಾರ್ಯಪ್ರವೃತ್ತವಾಗಲಿದ್ದು, ೨೦೨೫ರ ಬಳಿಕ ದೆಹಲಿಯಲ್ಲಿ ನಾಗರಿಕ ರಕ್ಷಣಾ ಸಿಬ್ಬಂದಿ, ಶಿಕ್ಷಕರು ಮತ್ತು ಸಫಾಯಿ ಕರ್ಮಚಾರಿಗಳು ಸೇರಿದಂತೆ ಎಲ್ಲಾ ಉದ್ಯೋಗಗಳನ್ನು ಖಾಯಂಗೊಳಿಸಲಾಗುವುದು ಎಂದು ಭರವಸೆ ನೀಡಿದರು.

<><><><>

ಇಂದು ಮೌನಿ ಅಮವಾಸ್ಯೆ. ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳಕ್ಕೆ ಇಂದು ವಿಶೇಷವಾದ ದಿನ. ಕುಂಭಮೇಳದಲ್ಲಿ ಭಕ್ತಾದಿಗಳಿಗೆ ವ್ಯಾಪಕ ವ್ಯವಸ್ಥೆಯನ್ನು ಕೈಗೊಳ್ಳಲಾಗುತ್ತಿದೆ. ಈ ಮಧ್ಯೆ ಪವಿತ್ರ ಸ್ನಾನದ ಸಂದರ್ಭದಲ್ಲಿ ಇಂದು ಮುಂಜಾನೆ ಕಾಲ್ತುಳಿತ ಸಂಭವಿಸಿದ್ದು, ಹಲವರು ಮೃತಪಟ್ಟಿರುವ ಕುರಿತು ವರದಿಯಾಗಿದೆ. ಕಾಲ್ತುಳಿತದಲ್ಲಿ ಕರ್ನಾಟಕದ ಬೆಳಗಾವಿಯ ನಾಲ್ವರು ಸಾವನ್ನಪ್ಪಿದ್ದಾರೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ. ಕಾಲ್ತುಳಿತಕ್ಕೆ ಸಿಲುಕಿಕೊಂಡಿದ್ದ ಇವರನ್ನು ಪ್ರಯಾಗರಾಜ್‌ನ ಖಾಸಗಿ ಆಸ್ಪತ್ರೆಯಲ್ಲಿ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೇ ಅಸುನೀಗಿದ್ದಾರೆ ಎಂದು ವರದಿಯಾಗಿದೆ.

ಮಹಾಕುಂಭಮೇಳದಲ್ಲಿ ನಡೆದ ಕಾಲ್ತುಳಿತ ಘಟನೆ ಅತ್ಯಂತ ದುಃಖಕರ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಪ್ರಾಣ ಕಳೆದುಕೊಂಡ ಭಕ್ತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದು, ಗಾಯಗೊಂಡ ಭಕ್ತರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಅವರು ಪ್ರಾರ್ಥಿಸಿದ್ದಾರೆ. ಮಹಾಕುಂಭದಲ್ಲಿ ಸಂಭವಿಸಿದ ದುರ್ಘಟನೆಯಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ಈ ಘಟನೆಯಲ್ಲಿ ಅನೇಕ ಜನರು ಗಾಯಗೊಂಡಿದ್ದು, ಉತ್ತರ ಪ್ರದೇಶ ಸರ್ಕಾರದೊಂದಿಗೆ ತಾವು ನಿರಂತರವಾಗಿ ಸಂಪರ್ಕದಲಿರುವುದಾಗಿ ಪ್ರಧಾನಿ ತಿಳಿಸಿದ್ದಾರೆ.

ಮಹಾಕುಂಭದಲ್ಲಿ ಸಂಭವಿಸಿದ ದುರಂತದ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಪ್ರಯಾಗರಾಜ್‌ನ ಮಹಾಕುಂಭದಲ್ಲಿ ಇಂದು ಮೌನಿ ಅಮವಾಸ್ಯೆಯ ನಿಮಿತ್ತ ೨ ಗಂಟೆಯ ವೇಳೆಗೆ ಸುಮಾರು ೫ ಕೋಟಿ ಭಕ್ತರು ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ. ಮೌನಿ ಅಮಾವಾಸ್ಯೆಯ ಸಂದರ್ಭದಲ್ಲಿ ಇಂದು ವಿವಿಧ ಅಖಾಡಗಳ ಸಂತರು ತ್ರಿವೇಣಿ ಸಂಗಮದಲ್ಲಿ ಅಮೃತ ಸ್ನಾನ ಕೈಗೊಂಡರು. ಇದಕ್ಕೂ ಮೊದಲು ಜನದಟ್ಟಣೆ ಮತ್ತು ಸಂಗಮ ಘಾಟ್‌ನಲ್ಲಿ ನಡೆದ ಕಾಲ್ತುಳಿತ ಘಟನೆಯಿಂದಾಗಿ ಅಖಾಡಗಳ ಸ್ನಾನದ ಆಚರಣೆಯನ್ನು ಮುಂದೂಡಲಾಗಿತ್ತು. ಇದರ ನಡುವೆ ಮಹಾಕುಂಭಕ್ಕೆ ವಿಶೇಷ ರೈಲುಗಳನ್ನು ರದ್ದುಗೊಳಿಸಲಾಗಿದೆ ಎಂಬ ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ವದಂತಿಗಳನ್ನು ಭಾರತೀಯ ರೈಲ್ವೆ ನಿರಾಕರಿಸಿದೆ. ಈ ಕುರಿತು ಮಾಹಿತಿ ನೀಡಿರುವ ರೈಲ್ವೆ ಮಂಡಳಿಯ ಮಾಹಿತಿ ಮತ್ತು ಪ್ರಚಾರ ವಿಭಾಗದ ಕಾರ್ಯನಿರ್ವಾಹಕ ನಿರ್ದೇಶಕ ದಿಲೀಪ್ ಕುಮಾರ್, ಈ ವರದಿಗಳು ಸಂಪೂರ್ಣವಾಗಿ ಆಧಾರರಹಿತವಾಗಿದ್ದು, ಮೌನಿ ಅಮಾವಾಸ್ಯೆಯ ಸಂದರ್ಭದಲ್ಲಿ ಯಾತ್ರಾರ್ಥಿಗಳ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ರೈಲ್ವೆವಿಭಾಗ ವಿವಿಧ ನಿಲ್ದಾಣಗಳಿಂದ ೩೬೦ ಕ್ಕೂ ಹೆಚ್ಚು ರೈಲುಗಳನ್ನು ಓಡಿಸುತ್ತಿದೆ ಎಂದರು.

<><><><>

ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ೩೮ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿಂದು ನಡೆದ ಮಹಿಳಾ ೧೦ ಮೀಟರ್ ಏರ್ ರೈಫಲ್ ಅರ್ಹತಾ ಸುತ್ತಿನ ಸ್ಪರ್ಧೆಯಲ್ಲಿ ೬೩೧.೨ ಅಂಕಗಳಿಸಿರುವ ಕರ್ನಾಟಕದ ಮೇಘನಾ ಸಜ್ಜನರ್ ನಾಳೆ ನಡೆಯುವ ಫೈನಲ್‌ಗೆ ಅರ್ಹತೆ ಪಡೆದಿದ್ದಾರೆ. ಫೈನಲ್‌ಗೆ ಅರ್ಹತೆ ಪಡೆದಿರುವ ಒಟ್ಟು ೮ ಅಥ್ಲೀಟ್‌ಗಳಲ್ಲಿ ೬೩೪.೯ ಅಂಕಗಳೊಂದಿಗೆ ಅಗ್ರಸ್ಥಾನದಲ್ಲಿರುವ ಹರಿಯಾಣದ ರಮಿತಾ ಜಿಂದಾಲ್ ಸೇರಿದ್ದಾರೆ.

<><><><>

ಚೆನ್ನೈನಲ್ಲಿಂದು ೨೩ನೇ ರಾಷ್ಟ್ರೀಯ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್ - ೨೦೨೫ರ ಅಧಿಕೃತ ಲಾಂಛನವನ್ನು ಅನಾವರಣಗೊಳಿಸಲಾಯಿತು. ಫೆಬ್ರವರಿ ೧೬ ರಿಂದ ೨೦ರವರೆಗೆ ನಡೆಯಲಿರುವ ಚಾಂಪಿಯನ್ ಶಿಪ್‌ನಲ್ಲಿ ದೇಶಾದ್ಯಂತ ೧ ಸಾವಿರದ ೬೦೦ ಪ್ಯಾರಾ ಅಥ್ಲೀಟಗಳು ಪಾಲ್ಗೊಳ್ಳಲಿದ್ದಾರೆ. ಲಾಂಛನ ಬಿಡುಗಡೆ ಕಾರ್ಯಕ್ರಮದಲ್ಲಿ ತಮಿಳುನಾಡಿನ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಅತ್ಯುಲ್ಯ ಮಿಶ್ರ, ಭಾರತೀಯ ಪ್ಯಾರಾ ಒಲಿಂಪಿಕ್ ಸಮಿತಿಯ ಕಾರ್ಯದರ್ಶಿ ಜಯವಂತ್ ಗುಂಡು ಹಮನಾವರ್, ಅರ್ಜುನ ಪ್ರಶಸ್ತಿ ಪುರಸ್ಕೃತ ಭಾರತದ ಪ್ಯಾರಾ ಬ್ಯಾಡ್ಮಿಂಟನ್ ಪಟು ತುಳಸಿಮತಿ ಮುರುಗೇಸನ್ ಮತ್ತಿತರರು ಉಪಸ್ಥಿತರಿದ್ದರು.

<><><><>

ಜನವರಿ ೨೬ ರಂದು ನವದೆಹಲಿಯ ಕರ್ತವ್ಯ ಪಥದಲ್ಲಿ ನಡೆದ ಗಣರಾಜ್ಯೋತ್ಸವದ ಪರೇಡ್‌ನಲ್ಲಿ 'ಮಹಾಕುಂಭ ೨೦೨೫ - ಸ್ವರ್ಣಿಮ್ ಭಾರತ: ವಿರಾಸತ್ ಔರ್ ವಿಕಾಸ್' ಎಂಬ ವಿಷಯಾಧಾರಿತ ಉತ್ತರ ಪ್ರದೇಶದ ಸ್ಥಬ್ದಚಿತ್ರ ಅತ್ಯುತ್ತಮ ಸ್ಥಬ್ದಚಿತ್ರ ಪ್ರಶಸ್ತಿಯನ್ನು ಗೆದ್ದುಕೊಂಡಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>